Akashvani : Bangalore
Regional Bulletin In Kannada
15.07.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಉಭಯ ಸದನಗಳಲ್ಲಿ ಅಧಿವೇಶನಕ್ಕೆ ಚಾಲನೆ; ಅಗಲಿದ ಗಣ್ಯರಿಗೆ ಸಂತಾಪ
- ವಾಲ್ಮೀಕಿ ನಿಗಮ, ಮೂಡಾ ಹಗರಣ; ರಾಜ್ಯ ಸರ್ಕಾರದ ವಿರುದ್ಧ ಸದನದ ಹೊರಗೆ ಬಿಜೆಪಿ ಪ್ರತಿಭಟನೆ
- ಬಿಜೆಪಿ ಆಡಳಿತದ ಅವಧಿಯಲ್ಲಿ ವ್ಯಾಪಕ ಭ್ರಷ್ಟಾಚಾರ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪ
- ರಾಜ್ಯದ ಮಲೆನಾಡು, ಕರಾವಳಿಯಲ್ಲಿ ಭಾರೀ ಮಳೆ; ಜನಜೀವನ ಅಸ್ತವ್ಯಸ್ಥ

<><*<><>*><>

ರಾಜ್ಯ ವಿಧಾನಮಂಡಲ ಅಧಿವೇಶನ ಇಂದು ಆರಂಭಗೊಂಡಿದೆ. ವಿಧಾನಸಭೆಯ ಮುಂಗಾರು ಅಧಿವೇಶನ ಆರಂಭವಾಗುತ್ತಿದಂತೆ ಇತ್ತೀಚೆಗೆ ನಿಧನರಾದ ೧೪ ಮಂದಿ ಗಣ್ಯರಿಗೆ ಸಂತಾಪ ಸೂಚಿಸಲಾಯಿತು. ಕಲಾಪ ಆರಂಭವಾಗುತಿದಂತೆ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅವರು ಅಗಲಿದ ಗಣ್ಯರಿಗೆ ಸಂತಾಪ ಸೂಚಿಸುವ ಪ್ರಸ್ತಾಪ ಮಂಡಿಸಿದರು. ವಿಧಾನಸಭೆಯ ಮಾಜಿ ಉಪಸಭಾಧ್ಯಕ್ಷೆ ಹಾಗೂ ಮಾಜಿ ಸಚಿವೆ ನಾಗಮ್ಮ ಕೇಶವ ಮೂರ್ತಿ, ಮಾಜಿ ಸಚಿವ ವಿ.ಶ್ರೀನಿವಾಸ್ ಪ್ರಸಾದ್, ಮಾಜಿ ಸಂಸದ ಹಾಗೂ ಮಾಜಿ ಶಾಸಕ ಸಿ.ಪಿ ಮೂಡಲಗಿರಿಯಪ್ಪ, ಮಾಜಿ ಸಚಿವ ಎಂ.ಪಿ.ಕೇಶವ ಮೂರ್ತಿ, ಮಾಜಿ ಶಾಸಕರಾದ ಕೆ.ವಸಂತ ಬಂಗೇರಾ, ಡಾ. ಪಾಟೀಲ್ ಬಸವನಗೌಡ ಗುರನಗೌಡ, ನಾಗರೆಡ್ಡಿ ಪಾಟೀಲ್, ರಮೇಶ್ ಕುಮಾರ ಪಾಂಡೆ, ಟಿ.ಎಚ್.ಶಿವಶಂಕರಪ್ಪ, ವಾಸು, ನಟ, ನಿರ್ದೇಶಕ, ನಿರ್ಮಾಪಕ ದ್ವಾರಕೀಶ್, ಹಿರಿಯ ಸಾಹಿತಿ ಕಮಲಾ ಹಂಪನಾ, ನಟಿ, ನಿರೂಪಕಿ ಅಪರ್ಣಾ ಮತ್ತು ಧರ್ಮಗುರು ಖಾಝಿ ಅಸ್ಸೈಯದ್ ಫಝುಲ್ ಕೋಯಮ್ಮ ತಂಗಳ್ ಅಲ್ ಬುಕಾರಿ ಅವರಿಗೆ ಸಂತಾಪ ಸೂಚಿಸಲಾಯಿತು. ಸಂತಾಪ ಸೂಚನೆ ಪ್ರಸ್ತಾಪನೆ ಮೇಲೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಸಚಿವ ಶ್ರೀನಿವಾಸ ಪ್ರಸಾದ್, ವಸಂತ ಬಂಗೇರ, ಸಾಹಿತಿ ಕಮಲಾ ಹಂಪನಾ, ನಟ ದ್ವಾರಕೀಶ ಸಹಿತ ಅಗಲಿದ ಗಣ್ಯರು ನಾಡಿಗೆ ನೀಡಿದ ಸೇವೆಯನ್ನು ಸ್ಮರಿಸಿದರು. ಪ್ರತಿಪಕ್ಷ ನಾಯಕ ಆರ್.ಅಶೋಕ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಮಾಜ ಕಲ್ಯಾಣ ಸಚಿವ ಡಾ ಎಚ್.ಸಿ. ಮಹಾದೇವಪ್ಪ, ತರಿಕೆರೆ ಶಾಸಕ ಶ್ರೀನಿವಾಸ, ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ ಅಗಲಿದ ಗಣ್ಯರಿಗೆ ಸೇವೆಯನ್ನು ಸ್ಮರಿಸಿದರು. ಇನ್ನೊಂದೆಡೆ, ಛತ್ತೀಸ್‌ಗಡ ಮಾಜಿ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಹಾಗೂ ಮಾಜಿ ಕೇಂದ್ರ ಸಚಿವ ಪ್ರದೀಪ್ ಕುಮಾರ್ ಜೈನ್ ವಿಧಾನಸಭೆಯ ಪ್ರೇಕ್ಷಕರ ಗ್ಯಾಲರಿಯಲ್ಲಿ ಕುಳಿತು ಕಲಾಪವನ್ನು ವೀಕ್ಷಿಸಿದರು. ಅವರನ್ನು ಸದನದ ಪರವಾಗಿ ಸಭಾಧ್ಯಕ್ಷ ಯು.ಟಿ.ಖಾದರ್ ಸ್ವಾಗತಿಸಿದರು.

<><*<><>*><>

ವಿಧಾನಪರಿಷತ್‌ನ ಮುಂಗಾರು ಅಧಿವೇಶನ ಇಂದು ಆರಂಭವಾಯಿತು. ಕಲಾಪ ಆರಂಭವಾಗುತ್ತಿದ್ದಂತೆ ಸಭಾಪತಿ ಬಸವರಾಜ ಹೊರಟ್ಟಿ ಅವರು ಸಭಾ ನಾಯಕರಾಗಿ ಕಾಂಗ್ರೆಸ್‌ನ ಭೋಸರಾಜ್ ಅವರನ್ನು ನೇಮಕ ಮಾಡಲಾಗಿದೆ ಎಂದು ಪ್ರಕಟಿಸಿದರು. ನಂತರ ಸಭಾಪತಿಗಳು ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು. ಈ ವೇಳೆ ಎಲ್ಲಾ ಸದಸ್ಯರು ಎದ್ದು ನಿಂತು ಪೀಠಿಕೆಯನ್ನು ಓದಿದರು. ಬಳಿಕ ಅಗಲಿದ ಗಣ್ಯರಿಗೆ ಗೌರವ ಸೂಚಿಸುವ ಸಂತಾಪ ನಿರ್ಣಯವನ್ನು ಮಂಡಿಸಿದರು. ಮಾಜಿ ವಿಧಾನಪರಿಷತ್ ಸದಸ್ಯರಾದ ಸುನಂದಾ ಪಾಟೀಲ, ಟಿ.ಕೆ.ಚಿನ್ನಸ್ವಾಮಿ, ಇಕ್ಬಾಲ್ ಅಹಮದ್ ಸರಡಗಿ, ಎಂ.ಬಿ. ಭಾನು ಪ್ರಕಾಶ್, ಮಾಜಿ ಸಚಿವರಾದ ನಾಗಮ್ಮ ಕೇಶವಮೂರ್ತಿ, ಕೇಂದ್ರದ ಮಾಜಿ ಸಚಿವ ಶ್ರೀನಿವಾಸಪ್ರಸಾದ್, ಎಂ.ಪಿ.ಕೇಶವಮೂರ್ತಿ, ಪಾಡ್ದನ ಕಲಾವಿದೆ ಗಿಡಿಗೆರೆ ರಾಮಕ್ಕ, ನಟ ದ್ವಾರಕೀಶ್, ಯಕ್ಷಗಾನ ಕಲಾವಿದ ಸುಬ್ರಹ್ಮಣ್ಯ ಧಾರೇಶ್ವರ, ಪೇತ್ರಿ ಮಾಧವನಾಯಕ್ , ಸರೋದ್ ವಾದಕ ರಾಜೀವ್ ತಾರಾನಾಥ, ಹಿರಿಯ ರಂಗಕರ್ಮಿ ಡಾ.ನಟೇಶ್ ರತ್ನ, ಕನ್ನಡ ವಿದ್ವಾಂಸರಾದ ಕಮಲಾ ಹಂಪನಾ, ನಿರೂಪಕಿ ಅಪರ್ಣಾ ಅವರಿಗೆ ಸದನವು ಸಂತಾಪ ಸೂಚಿಸಿತು. ಸಂತಾಪ ನಿರ್ಣಯದ ಮೇಲೆ ಮಾತನಾಡಿದ ಸಭಾಪತಿ ಹೊರಟ್ಟಿ ಅವರು, ಅಗಲಿದ ಗಣ್ಯರ ಸೇವೆಯನ್ನು ಸ್ಮರಿಸಿದರು.

<><*<><>*><>

ಸಾವಿರಾರು ಕೋಟಿ ರೂಪಾಯಿಗಳ ಮುಡಾ ಹಗರಣ ಮತ್ತು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸದನದಲ್ಲಿ ಉತ್ತರ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಆಗ್ರಹಿಸಿದರು. ಬಿ.ವೈ.ವಿಜಯೇಂದ್ರ ಮತ್ತು ವಿರೋಧ ಪಕ್ಷದ ನಾಯಕ ಆರ್.ಅಶೋಕ್

ನೇತೃತ್ವದಲ್ಲಿ ಇಂದು ಶಾಸಕರ ಭವನದ ಮಹರ್ಷಿ ವಾಲ್ಮೀಕಿ ಪ್ರತಿಮೆ ಬಳಿ ಬಿಜೆಪಿ ವತಿಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಮಾತನಾಡಿದ ಬಿ.ವೈ.ವಿಜಯೇಂದ್ರ, ಮುಡಾ ಹಗರಣದ ತನಿಖೆಯನ್ನು ನಿವೃತ್ತ ನ್ಯಾಯಾಧೀಶರಿಂದ ನಡೆಸುವ ಬದಲು ಸಿಬಿಐಗೆ ಒಪ್ಪಿಸಬೇಕು ಎಂದು ಒತ್ತಾಯಿಸಿದರು. ಸಾವಿರಾರು ಕೋಟಿ ರೂಪಾಯಿ ಬೆಲೆಬಾಳುವ ನಿವೇಶನಗಳಿಗೆ ಸಂಬಂಧಿಸಿ ಮುಡಾ ಹಗರಣ ನಡೆದಿದ್ದು, ಇದರಲ್ಲಿ ಮುಖ್ಯಮಂತ್ರಿಗಳ ಕುಟುಂಬವೇ ಪಾಲುದಾರರಾಗಿದ್ದು, ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಹೇಳಿದರು. ಸಿದ್ದರಾಮಯ್ಯನವರು ಪರಿಶಿಷ್ಟ ವರ್ಗ, ಪರಿಶಿಷ್ಟ ಪಂಗಡದವರಿಗೆ ನ್ಯಾಯ ಕೊಡುವುದಾಗಿ ಹೇಳಿ ಅಧಿಕಾರಕ್ಕೆ ಬಂದವರು. ಆದರೆ, ದಲಿತರ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಲೂಟಿ ಮಾಡಿದ್ದಲ್ಲದೆ, ಅದೇ ಮೊತ್ತದಲ್ಲಿ ಲೋಕಸಭಾ ಚುನಾವಣೆ ನಡೆಸಿದ್ದಾರೆ ಎಂದು ಆರೋಪಿಸಿದರು. ವಾಲ್ಮೀಕಿ ನಿಗಮದ ಹಗರಣದ ಸಂಬಂಧ ಸದನದಲ್ಲಿ ನಿಲುವಳಿ ಸೂಚನೆ ಮಂಡಿಸಲಾಗುವುದು. ಇದರ ಕುರಿತು ಚರ್ಚೆ ಆಗಲೇಬೇಕು. ಮುಖ್ಯಮಂತ್ರಿಗಳು ಉತ್ತರ ಕೊಡಲೇಬೇಕು ಎಂದು ಬಿ.ವೈ.ವಿಜಯೇಂದ್ರ ಒತ್ತಾಯಿಸಿದರು.

<><*<><>*><>

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು, ಮಾಧ್ಯಮಗಳಲ್ಲಿ ಚರ್ಚೆಗೆ ಬರಲಿ. ಇಲ್ಲವೇ ಅವರ ಪಕ್ಷದ ಶಾಸಕರಿಂದ ಸದನದಲ್ಲಿ ಚರ್ಚೆ ಮಾಡಿಸಲಿ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಕಸ ವಿಲೇವಾರಿ ಟೆಂಡರ್‌ನಲ್ಲಿ ೧೫ ಸಾವಿರ ಕೋಟಿ ರೂಪಾಯಿ ಲಂಚ ಪಡೆಯಲಾಗಿದೆ ಎಂಬ ಕುಮಾರಸ್ವಾಮಿ ಅವರ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಕುಮಾರಸ್ವಾಮಿ ಹತಾಶೆಯಲ್ಲಿದ್ದಾರೆ. ಅವರು ಬಹಿರಂಗ ಚರ್ಚೆಗೆ ಬರಲಿ ಎಂದರು. ಮುಡಾ ಹಗರಣ ಸೇರಿದಂತೆ ಹಲವಾರು ಹಗರಣಗಳು ನಡೆದಿರುವುದು ಬಿಜೆಪಿ ಕಾಲದಲ್ಲಿ. ಅವರ ಆಡಳಿತ ಅವಧಿಯಲ್ಲಿ ಭ್ರಷ್ಟಾಚಾರದ ಸರಮಾಲೆಯೇ ನಡೆದಿದೆ ಎಂದು ಆರೋಪಿಸಿದ ಅವರು, ಭ್ರಷ್ಟಾಚಾರ ರಹಿತ ಆಡಳಿತ ಮತ್ತು ಆಡಳಿತ ಶುದ್ಧೀಕರಣ ಮಾಡುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದೆ " ಎಂದು ಸಮರ್ಥಿಸಿಕೊಂಡರು.

<><*<><>*><>

ಕರ್ನಾಟಕ ವಿಧಾನಸಭಾ ಸಭಾಂಗಣದ ಪ್ರವೇಶದ್ವಾರಕ್ಕೆ ಹೊಸದಾಗಿ ಬೀಟೆ ಮರದಲ್ಲಿ ಕಲಾತ್ಮಕವಾಗಿ ಕುಸರಿ ಕೆತ್ತನೆಯಿಂದ ವಿನ್ಯಾಸಗೊಳಿಸಿ ಅಳವಡಿಸಿರುವ ದ್ವಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಉದ್ಘಾಟಿಸಿದರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನ ಸಭೆ ಸಭಾಧ್ಯಕ್ಷ ಯು.ಟಿ.ಖಾದರ್, ಗೃಹ ಸಚಿವ ಡಾ. ಜಿ.ಪರಮೇಶ್ವರ, ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವ ಪ್ರಿಯಾಂಕ ಖರ್ಗೆ, ವಿಧಾನಸಭೆ ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

<><*<><>*><>

ಬೆಂಗಳೂರಿನಲ್ಲಿ ಶಾಶ್ವತ ರಸ್ತೆಗಳನ್ನು ನಿರ್ಮಿಸಲು ೧ ಸಾವಿರದ ೮೦೦ ಕೋಟಿ ರೂಪಾಯಿ ವೆಚ್ಚದಲ್ಲಿ ೧೫೭ ಕಿಲೋ ಮೀಟರ್ ವೈಟ್ ಟಾಪಿಂಗ್ ರಸ್ತೆ ನಿರ್ಮಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು. 'ಬ್ರ್ಯಾಂಡ್ ಬೆಂಗಳೂರು, ಸುಗಮ ಸಂಚಾರ ಬೆಂಗಳೂರು' ಪರಿಕಲ್ಪನೆಯಡಿ ಚಾಮರಾಜಪೇಟೆ, ಗಾಂಧಿನಗರ, ಮಲ್ಲೇಶ್ವರ, ಮಹಾಲಕ್ಷ್ಮೀಪುರಗಳಲ್ಲಿ ೨೦೦ ಕೋಟಿ ರೂಪಾಯಿ ವೆಚ್ಚದಲ್ಲಿ ೧೯.೬೭ ಕಿಲೋಮೀಟರ್ ವೈಟ್‌ಟಾಪಿಂಗ್ ರಸ್ತೆ ನಿರ್ಮಾಣ ಕಾಮಗಾರಿಗೆ ಅವರು ಇಂದು ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಡಿ.ಕೆ.ಶಿವಕುಮಾರ್, ಬೆಂಗಳೂರಿನ ಪ್ರಮುಖ ರಸ್ತೆಗಳಲ್ಲಿ ಗುಂಡಿಗಳು ಬೀಳಬಾರದು ಎಂಬ ಉದ್ದೇಶದಿಂದ ವೈಟ್‌ಟಾಪಿಂಗ್ ರಸ್ತೆ ಮಾಡಲಾಗುತ್ತಿದೆ. ಈ ರಸ್ತೆಗಳು ಸುಮಾರು ೨೫ ವರ್ಷಗಳ ಕಾಲ ಬಾಳಿಕೆ ಬರುತ್ತವೆ. ನಿತ್ಯ ಮೂರ್ನಾಲ್ಕು ವಾರ್ಡ್‌ಗಳಲ್ಲಿ ಈ ರಸ್ತೆ ಕಾಮಗಾರಿಗೆ ಚಾಲನೆ ನೀಡಲಾಗುವುದು. ಕಾಲಮಿತಿಯಲ್ಲಿ ಈ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದರು. ಸಂಚಾರ ದಟ್ಟಣೆ ಸಮಸ್ಯೆ ಬಗೆಹರಿಸಲು ೨೦೦ ಕಿಲೋ ಮೀಟರ್‌ನಷ್ಟು ಹೊಸ ರಸ್ತೆ ನಿರ್ಮಿಸಲು ತೀರ್ಮಾನಿಸಲಾಗಿದ್ದು, ಉನ್ನತ ಗುಣಮಟ್ಟಕ್ಕಾಗಿ ವೈಟ್ ಟಾಪಿಂಗ್ ಮಾಡಲು ಸೂಚಿಸಲಾಗಿದೆ ಎಂದು ಹೇಳಿದರು.

<><*<><>*><>

ರಾಜ್ಯದ ಕರಾವಳಿಯಲ್ಲಿ ಭಾರೀ ಮಳೆಯಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಕಳೆದ ಎರಡು ದಿನಗಳಿಂದ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಇಂದು ಜಿಲ್ಲೆಯ ಎಲ್ಲಾ ಅಂಗನವಾಡಿ, ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಜಿಲ್ಲೆಯಲ್ಲಿ ಸತತವಾಗಿ ಗಾಳಿ ಮಳೆಯಾಗುತ್ತಿದ್ದು, ಜನತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಸೂಚನೆ ನೀಡಿದ್ದಾರೆ. ಕಾರಾವಳಿಯಲ್ಲಿ ಮಳೆ ಮುಂದುವರಿಯುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಭಾರತೀಯ ಹವಾಮಾನ ಇಲಾಖೆ ಇಂದು

ರೆಡ್ ಅಲರ್ಟ್ ಘೋಷಿಸಿದೆ. ಮಳೆಯ ಜತೆ ಗಾಳಿ ಮತ್ತು ಸಮುದ್ರದಲ್ಲಿ ಅಲೆಗಳ ಅಬ್ಬರ ಹೆಚ್ಚಾಗುವ ನಿರೀಕ್ಷೆ ಇದ್ದು, ನಾಳೆಯಿಂದ ಇದೇ ೧೮ರ ವರೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಕೊಡಗು ಜಿಲ್ಲೆಯಲ್ಲಿ ಧಾರಾಕಾರ ಮಳೆ ಮುಂದುವರೆದಿದೆ. ಹಾರಂಗಿ ಜಲಾಶಯದಿಂದ ೫ ಸಾವಿರ ಕ್ಯೂಸೆಕ್ ನೀರನ್ನು ಹೊರ ಬಿಡಲಾಗಿದೆ. ಹಾರಂಗಿ ಜಲಾಶಯಕ್ಕೆ ೬ ಸಾವಿರದ ೮೦೦ ಕ್ಯೂಸೆಕ್ ನೀರಿನ ಒಳ ಹರಿವು ಇದೆ. ಭಾರಿ ಮಳೆ, ಗಾಳಿ ಹಿನ್ನೆಲೆಯಲ್ಲಿ ಇಂದು ಕೊಡಗು ಜಿಲ್ಲೆಯ ಶಾಲಾ-ಕಾಲೇಜುಗಳಿಗೆ ರಜೆ ನೀಡಲಾಗಿದೆ. ಮಳೆಯಿಂದಾಗಿ ಕೊಡಗಿನಲ್ಲಿ ಕಾವೇರಿ ಮತ್ತು ಲಕ್ಷ್ಮಣ ತೀರ್ಥ ನದಿಗಳು ತುಂಬಿ ಹರಿಯುತ್ತಿವೆ. ಪ್ರವಾಹ ವಿಕೋಪ ಪರಿಸ್ಥಿತಿ ನಿಭಾಯಿಸಲು ಜಿಲ್ಲೆಯಲ್ಲಿ ಬೀಡು ಬಿಟ್ಟಿರುವ ರಾಷ್ಟ್ರೀಯ ವಿಪತ್ತು ನಿರ್ವಹಣಾಪಡೆ- ಎನ್‌ಡಿಆರ್‌ಎಫ್ ತಂಡ ಸಿದ್ಧವಾಗಿದೆ. ಜಿಲ್ಲೆಯಲ್ಲಿ ಎಲ್ಲೋ ಅಲರ್ಟ್ ಘೋಷಿಸಲಾಗಿದೆ ಎಂದು ನಮ್ಮ ಕೊಡಗು ಪ್ರತಿನಿಧಿ ವರದಿ ಮಾಡಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ನಿನ್ನೆಯಿಂದ ವ್ಯಾಪಕ ಮಳೆ ಸುರಿಯುತ್ತಿದ್ದು, ಇಂದು ಎಲ್ಲಾ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಲಕ್ಷ್ಮೀ ಪ್ರಿಯ ಕೆ. ಆದೇಶಿಸಿದ್ದಾರೆ. ಸತತ ಮಳೆಗೆ ಹೊನ್ನಾವರ ತಾಲೂಕಿನ ಕರ್ವಾ ಬಳಿಯ ರಾಷ್ಟ್ರೀಯ ಹೆದ್ದಾರಿಯ ಮೇಲೆ ಗುಡ್ಡ ಕುಸಿದು, ಹೊನ್ನಾವರ-ಸಾಗರ-ಬೆಂಗಳೂರು ಮಾರ್ಗದಲ್ಲಿ ವಾಹನ ಸಂಚಾರ ಸಂಪೂರ್ಣ ಬಂದ್ ಆಗಿತ್ತು. ಭಟ್ಕಳ, ಹೊನ್ನಾವರ, ಕುಮಟಾ, ಅಂಕೋಲಾ, ಕಾರವಾರ, ಶಿರಸಿ, ಸಿದ್ದಾಪುರ ಹಾಗೂ ಜೊಯಿಡಾ ತಾಲೂಕಿನಲ್ಲಿ ವ್ಯಾಪಕ ಮಳೆ ಸುರಿಯುತ್ತಿದೆ. ಕರಾವಳಿಯಲ್ಲಿ ಸತತ ಮಳೆಯಾಗುತ್ತಿರುವುದರಿಂದ ಪ್ರವಾಹ ಆತಂಕ ಉಂಟಾಗಿದೆ. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ನೆನ್ನೆಯಿಂದ ನಿರಂತರವಾಗಿ ಗಾಳಿ ಸಹಿತ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ನೆನ್ನೆ ಜಿಲ್ಲೆಯ ಶೃಂಗೇರಿ ತಾಳೂಕಿನ ಕೆರೆಕಟ್ಟೆಯಲ್ಲಿ ೧೩೬.೮ ಮಿಲಿ ಮೀಟರ್, ಕಿಗ್ಗಾದಲ್ಲಿ ೧೦೬.೪ ಮಿಲಿ ಮೀಟರ್ ಮಳೆಯಾಗಿದ್ದು, ಇಂದು ಕೂಡ ಮುಂದುವೆರೆದಿದೆ. ಕಳಸ, ಹೊರನಾಡು, ಶೃಂಗೇರಿ, ಕೊಟ್ಟಿಗೆಹಾರ, ಕುದುರೆಮುಖ ಸೇರಿ ಹಲವೆಡೆ ಮುಂಜಾನೆಯಿಂದ ನಿರಂತರ ಮಳೆಯಾಗುತ್ತಿದ್ದು, ಮೂಡಿಗೆರೆ ತಾಲೂಕು ಕೋಗಿಲೆ ಗ್ರಾಮದ ಬಳಿ ಮರವೊಂದು ರಸ್ತೆಗೆ ಉರುಳಿಬಿದ್ದು, ಸುಮಾರು ೩ ಗಂಟೆ ಕಾಲ ಸಂಚಾರ ದಟ್ಟಣೆ ಉಂಟಾಗಿತ್ತು.

**<><*<><>*><>**

ಹಾವೇರಿ ಜಿಲ್ಲೆಯ ಕೆಲ ಗ್ರಾಮಗಳಲ್ಲಿ ಡೆಂಘಿ ಪ್ರಕರಣಗಳು ಹೆಚ್ಚಾಗಿವೆ. ಜನರಿಗೆ ಚಿಕಿತ್ಸೆ ನೀಡಲು ತಾತ್ಕಾಲಿಕ ಕ್ಲಿನಿಕ್‌ಗಳನ್ನು ತೆರೆಯಲು ತೀರ್ಮಾನಿಸಲಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಸ್ಥಳೀಯ ಮಟ್ಟದಲ್ಲಿಯೇ ಜನರಿಗೆ ಗುಣಮಟ್ಟದ ಚಿಕಿತ್ಸೆ ನೀಡುವುದು ಇದರ ಉದ್ದೇಶ. ಜಿಲ್ಲಾಸ್ಪತ್ರೆ ಹಾಗೂ ಎಲ್ಲ ತಾಲ್ಲೂಕು ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆಯಾಗದಂತೆ ನೋಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಡೆಂಘಿ ಚಿಕಿತ್ಸೆ ಪಡೆದು ಆಸ್ಪತ್ರೆಯಿಂದ ಮನೆಗೆ ಹೋದ ರೋಗಿಗಳ ಮೇಲೆ ೧೪ ದಿನ ನಿಗಾ ವಹಿಸಲಾಗುತ್ತಿದೆ. ಅವರ ಆರೋಗ್ಯದಲ್ಲಿ ಏರುಪೇರು ಕಂಡುಬಂದರೆ, ಆರೋಗ್ಯ ಇಲಾಖೆ ಸಿಬ್ಬಂದಿ ತ್ವರಿತವಾಗಿ ಸ್ಪಂದಿಸಿ ಚಿಕಿತ್ಸೆಗೆ ವ್ಯವಸ್ಥೆ ಮಾಡಲಿದ್ದಾರೆ. ಡೆಂಘಿಯನ್ನು ಸಂಪೂರ್ಣವಾಗಿ ನಿಯಂತ್ರಿಸಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ. ಕೋವಿಡ್ ಸಂದರ್ಭದಲ್ಲಿ ತೆರೆಯಲಾಗಿದ್ದ ವಾರ್‌ರೂಮ್ ಮಾದರಿಯಲ್ಲಿಯೇ ಡೆಂಘಿಗಾಗಿ ವಾರ್‌ರೂಮ್ ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**